# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 475(631) |
| ಸದಸ್ಯರ ಹೆಸರು | : | ಶ್ರೀ ಸಿ. ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 11-12-2025 |
| ಉತ್ತರಿಸುವ ಸಚಿವರು | : | ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕದಲ್ಲಿ ಪಾರಂಪರಿಕ ತಾಣಗಳು, ಗಿರಿಧಾಮಗಳು, ಕಡಲ ತೀರಗಳು, ಅರಮನೆ, ಕೋಟೆಕೊತ್ತಲಗಳಂತಹ ವೈವಿಧ್ಯಮಯ ಪ್ರವಾಸಿ ತಾಣಗಳಿದ್ದರೂ ರಾಜ್ಯವು ವಿದೇಶಿ ಪ್ರವಾಸಿಗರನ್ನು ಆಕರ್ಷಿಸುವಲ್ಲಿ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕವು ಪ್ರಕೃತಿ, ಸಂಸ್ಕೃತಿ, ಪರಂಪರೆ, ವಿಶ್ವ ಪರಂಪರೆ ತಾಣಗಳು, ಕಡಲ ತೀರಗಳು ಸೇರಿದಂತೆ ಅನೇಕ ಪ್ರವಾಸಿ ಸಂಪನ್ಮೂಲಗಳನ್ನು ಹೊಂದಿದ್ದು, 2022 ರಲ್ಲಿ 1,28,520 ವಿದೇಶಿ ಪ್ರವಾಸಿಗರು, 2023 ರಲ್ಲಿ 4,09,333 ವಿದೇಶಿ ಪ್ರವಾಸಿಗರು & 2024 ರಲ್ಲಿ 4,85,204 ವಿದೇಶಿ ಪ್ರವಾಸಿಗರು ರಾಜ್ಯಕ್ಕೆ ಭೇಟಿ ನೀಡಿರುತ್ತಾರೆ. ಪ್ರತೀ ವರ್ಷವೂ ರಾಜ್ಯಕ್ಕೆ ಭೇಟಿ ನೀಡುವ ಪ್ರವಾಸಿಗರ ಸಂಖ್ಯೆಯಲ್ಲಿ ಏರಿಕೆಯಾಗುತ್ತಿದ್ದು, ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ವಿದೇಶಿ ಪ್ರವಾಸಿಗರನ್ನು ಆಕರ್ಷಿಸಲು ಹಾಗೂ ನಿರೀಕ್ಷಿತ ಮಟ್ಟದ ವೃದ್ಧಿ ಮಾಡಲು ಕ್ರಮವಹಿಸಲಾಗುತ್ತಿದೆ. |
| ಆ) | ಬಂದಿದ್ದಲ್ಲಿ, ವಿದೇಶಿ ಪ್ರವಾಸಿಗರನ್ನು ಆಕರ್ಷಿಸುವಲ್ಲಿ ವಿಫಲವಾಗಿರುವುದಕ್ಕೆ ಕಾರಣಗಳೇನು; ಕಳೆದ ಮೂರು ವರ್ಷಗಳಲ್ಲಿ ರಾಜ್ಯಕ್ಕೆ ಭೇಟಿ ನೀಡಿದ ವಿದೇಶಿ ಪ್ರವಾಸಿಗರ ಸಂಖ್ಯೆ ಎಷ್ಟು; | ವಿದೇಶಿ ಪ್ರವಾಸಿಗರನ್ನು ಆಕರ್ಷಿಸಲು ಈಗಾಗಲೇ ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಪ್ರವಾಸಿಗರಿಗೆ ಅನುಕೂಲವಾಗುವಂತೆ ಮಾಹಿತಿಯನ್ನು ಒದಗಿಸಲು kiosk ತೆರೆಯಲಾಗಿದೆ.<br>ವಿದೇಶಿ ಪ್ರವಾಸಿಗರನ್ನು ಆಕರ್ಷಿಸಲು ನೇರ ಅಂತರಾಷ್ಟ್ರೀಯ ವಿಮಾನಗಳನ್ನು ಬೆಂಗಳೂರು ಮಾತ್ರವಲ್ಲದೇ ಮಂಗಳೂರು ಹುಬ್ಬಳ್ಳಿ, ಮೈಸೂರು, ಬೆಳಗಾವಿ ಕಲಬುರಗಿ, ಬಳ್ಳಾರಿ ಹಾಗೂ ಕರಾವಳಿ ಭಾಗದ ಜಿಲ್ಲೆಗಳಿಗೆ ಹೆಚ್ಚಿನ ಅಂತಾರಾಷ್ಟ್ರೀಯ ಸಂಪರ್ಕಗಳನ್ನು ಕಲ್ಪಿಸಲು ಪರಿಶೀಲಿಸಲಾಗುತ್ತಿದೆ ಹಾಗೂ ಎಲ್ಲಾ ವಿಮಾನ ನಿಲ್ದಾಣಗಳಲ್ಲಿಯೂ ಪ್ರವಾಸೋದ್ಯಮ ಕಿಯೋಸ್ಕ ತೆರೆಯಲು ಪರಿಶೀಲಿಸಲಾಗುತ್ತಿದೆ.<br>ರಾಜ್ಯದಲ್ಲಿರುವ ಪ್ರವಾಸೋದ್ಯಮ ವೈಶಿಷ್ಟ್ಯಗಳನ್ನು ಅಂತರಾಷ್ಟ್ರೀಯ ಮಟ್ಟದಲ್ಲಿ ಬ್ರ್ಯಾಂಡಿಂಗ್ ಮಾಡುವ ಬಗ್ಗೆ ಮಾಡಲು ಕ್ರಮವಹಿಸಲಾಗುತ್ತಿದೆ.<br>ಕಳೆದ ಮೂರು ವರ್ಷಗಳಲ್ಲಿ ರಾಜ್ಯಕ್ಕೆ ಭೇಟಿ ನೀಡಿರುವ ವಿದೇಶಿ ಪ್ರವಾಸಿಗರ ಸಂಖ್ಯೆ ಈ ಕೆಳಗಿನಂತಿದೆ. |

| ವರ್ಷ | ವಿದೇಶಿ ಪ್ರವಾಸಿಗರ ಸಂಖ್ಯೆ |
|---|---|
| 2022 | 1,28,520 |
| 2023 | 4,09,333 |
| 2024 | 4,85,204 |

| | | |
|---|---|---|
| ಇ) | ಪ್ರವಾಸಿ ತಾಣಗಳನ್ನು ಹೆಚ್ಚು ಆಕರ್ಷಿತಗೊಳಿಸುವುದಕ್ಕೆ ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು? | ಪ್ರವಾಸಿ ತಾಣಗಳನ್ನು ಹೆಚ್ಚು ಆಕರ್ಷಿತಗೊಳಿಸುವುದಕ್ಕೆ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.<br>• **Brand Karnataka**' ಹೆಸರಿನಲ್ಲಿ ಜಾಗತಿಕ ಮಟ್ಟದಲ್ಲಿ ಮಾರುಕಟ್ಟೆ ಮತ್ತು ಪ್ರಚಾರ ಅಭಿಯಾನಗಳನ್ನು ಕೈಗೊಳ್ಳಲಾಗುತ್ತಿದೆ.<br>• ಜಾಗತಿಕ ಪ್ರವಾಸೋತ್ಸವಗಳು, ರೋಡ್ ಶೋ ಗಳಲ್ಲಿ ಕರ್ನಾಟಕದ ಸಕ್ರಿಯವಾಗಿ ಪಾಲ್ಗೊಳ್ಳಲಾಗುತ್ತಿದೆ.<br>• ವಿದೇಶಿ ಪ್ರವಾಸಿಗರನ್ನು ಆಕರ್ಷಿಸುವ ನಿಟ್ಟಿನಲ್ಲಿ Karnataka International Travel Expo (KITE) ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.<br>• ಇಲಾಖೆಯಿಂದ ಆಯೋಜಿಸುವ KITE ಕಾರ್ಯಕ್ರಮಕ್ಕೆ ಆಗಮಿಸುವ ವಿದೇಶಿಗರಿಗೆ Familiarization Trip (FAM Trip) ಆಯೋಜಿಸಲಾಗಿದೆ.<br>• ಬೆಂಗಳೂರಿನ ಮೂಲಕ **ಹೊಸ ನೇರ ಅಂತರರಾಷ್ಟ್ರೀಯ ವಿಮಾನ ಮಾರ್ಗಗಳನ್ನು** ಪ್ರೋತ್ಸಾಹಿಸಲು ನಾಗರಿಕ ವಿಮಾನಯಾನ ಸಚಿವಾಲಯದೊಂದಿಗೆ ಸಮನ್ವಯ ಸಾಧಿಸಲಾಗುತ್ತಿದೆ.<br>• ಯುನೆಸ್ಕೋ ಪರಂಪರೆ ತಾಣಗಳ (ಹಂಪಿ, ಪಟ್ಟದಕಲ್) ಸುತ್ತಮುತ್ತ ಮೂಲಸೌಕರ್ಯಗಳನ್ನು ಜಾಗತಿಕ ಮಟ್ಟದಲ್ಲಿ ಸುಧಾರಿಸುವ ಬಗ್ಗೆ ಪುರಾತತ್ವ ಇಲಾಖೆಯ ಸಹಯೋಗದೊಂದಿಗೆ ಅಭಿವೃದ್ಧಿಪಡಿಸಲು ಪರಿಶೀಲಿಸಲಾಗುತ್ತಿದೆ.<br>• ಕರಾವಳಿ ಮತ್ತು ಕಾಫಿ ಬೆಲ್ಟ್ ಪ್ರದೇಶಗಳಲ್ಲಿ **ಥೀಮ್-ಆಧಾರಿತ ಪ್ರವಾಸೋದ್ಯಮ** (Adventure, Wellness, Eco-tourism) ಅಭಿವೃದ್ಧಿ ಪಡಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ.<br>• ಪ್ರವಾಸಿ ಮಾಹಿತಿ ಪ್ರಾಪ್ತಿಗೆ ಸುಲಭವಾಗುವಂತೆ **Integrated Karnataka Tourism Portal** ಮತ್ತು ಡಿಜಿಟಲ್ ಕ್ಯಾಂಪೇನ್‌ಗಳ ಬಲವರ್ಧನೆ ಮಾಡುವ ಬಗ್ಗೆ ಪರಿಶೀಲಿಸಲಾಗುತ್ತಿದೆ.<br>• ವಿದೇಶಿ ಪ್ರವಾಸಿಗರಿಗೆ ಸುರಕ್ಷತೆ, ಭಾಷಾ ಮಾರ್ಗದರ್ಶಕರು, ಸ್ವಚ್ಛತೆ ಮುಂತಾದ ಸುಧಾರಣೆಗೆ ವಿಶೇಷ ಮಾನದಂಡಗಳನ್ನು ರೂಪಿಸಲಾಗುತ್ತಿದೆ.<br>• ಹೆಚ್ಚಿನ ಸಂಖ್ಯೆಯಲ್ಲಿ ವಿದೇಶಿ ಪ್ರವಾಸಿಗರನ್ನು ರಾಜ್ಯದ ಪ್ರವಾಸಿ ತಾಣಗಳಿಗೆ ಆಕರ್ಷಿಸಲು ಪ್ರವಾಸೋದ್ಯಮ ಇಲಾಖೆಯಿಂದ ಕರ್ನಾಟಕ ಸಾಂಸ್ಕೃತಿಕ ರಾಜತಾಂತ್ರಿಕ ಸಮಾವೇಶ (**Karnataka Cultural Diplomacy Conclave**) ಆಯೋಜಿಸುವುದರ ಮೂಲಕ ವಿದೇಶಿ ಮಿಷನ್ ಪ್ರತಿನಿಧಿಗಳೊಂದಿಗೆ ಸಂವಾದ ಕಾರ್ಯಕ್ರವಮನ್ನು ಏರ್ಪಡಿಸಲಾಗಿದೆ. |

**ಸಂಖ್ಯೆ: ಟಿಓಆರ್ 262 ಟಿಡಿವಿ 2025**

**(ಹೆಚ್.ಕೆ.ಪಾಟೀಲ)**
ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ
ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು